np newz www.npnewz.com Contact@npnewz.com 8951054014, 7483168889

# ಎನ್ ಪಿ ನ್ಯೂಸ್

ಇದು ಭರವಸೆಯ ಬೆಳಕು

NP NEWS

ಬುಧವಾರ 25 ಫೆಬ್ರವರಿ 2026 • ಸಂಪುಟ 02 • ಸಂಚಿಕೆ 01 • ಪುಟ 01 • ಪ್ರಧಾನ ಸಂಪಾದಕರು: ವಾಸುದೇವ ಭಟ್ ನೆಕ್ಕರಪಲ್ಕೆ

## ಕಾರ್ಕಳದಲ್ಲಿ ಅದ್ದೂರಿಯಾಗಿ ನಡೆದ ಸಿದ್ದರಾಮಯ್ಯನವರ ಕಾರ್ಯಕ್ರಮ



**ಕಾರ್ಕಳ:** ಇಲ್ಲಿನ ಪ್ರತಿಷ್ಠಿತ ವಿದ್ಯಾಸಂಸ್ಥೆಯ 35ನೇ ವರ್ಷದ ವಾರ್ಷಿಕೋತ್ಸವ ಹಾಗೂ 7 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣಗೊಂಡ ಅಂಬೇಡ್ಕರ್ ಭವನ ಮತ್ತು ಕಿಸಾನ್ ಸಭಾಂಗಣದ ಉದ್ಘಾಟನಾ ಸಮಾರಂಭವು ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಉಪಸ್ಥಿತಿಯಲ್ಲಿ ಅದ್ದೂರಿಯಾಗಿ ಜರುಗಿತು.

### ಬಡ ಮಕ್ಕಳ ಏಳಿಗೆಯೇ ನಮ್ಮ ಗುರಿ

ಕಾರ್ಯಕ್ರಮದ ದಿಕ್ಸೂಚಿ ಭಾಷಣ ಮಾಡಿದ ಹಿರಿಯ ನಾಯಕ ವೀರಪ್ಪ ಮೊಯ್ಲಿ ಅವರು, "ನಮ್ಮ ಸಂಸ್ಥೆಯಲ್ಲಿ ಅನಗತ್ಯ ದುಂದು ವೆಚ್ಚಕ್ಕೆ ಅವಕಾಶವಿಲ್ಲ. ಬಡವರ ಮಕ್ಕಳನ್ನು ಬೆಳೆಸುವುದೇ ನಮ್ಮ ಏಕೈಕ ಗುರಿ. ಇಲ್ಲಿ ದಾಖಲಾಗುವ ಮಕ್ಕಳು ನಿರ್ಗತಿಕರಾಗಿರಬೇಕು ಮತ್ತು ಯಾವುದೇ ಡೊನೇಷನ್ ಪಡೆಯುವ ಕ್ರಮ ನಮ್ಮಲ್ಲಿಲ್ಲ. ಕನಿಷ್ಠ 35 ಅಂಕ ಪಡೆದ ಅಥವಾ ಪೋಷಕರನ್ನು ಕಳೆದುಕೊಂಡ ಮಕ್ಕಳಿಗೆ ನಾವು ಮೊದಲ ಆದ್ಯತೆ ನೀಡುತ್ತೇವೆ. ಅಂತಹ ಮಕ್ಕಳನ್ನು 90 ಅಂಕ ಪಡೆಯುವಂತೆ ಸಿದ್ಧಪಡಿಸುವುದು ನಮ್ಮ ಸಂಸ್ಥೆಯ ಶ್ರಮ," ಎಂದರು. ಅಲ್ಲದೆ, ತಮ್ಮ ವಕೀಲ ವೃತ್ತಿಯಿಂದ ರಾಜಕಾರಣದವರೆಗಿನ ಕಷ್ಟದ ಹಾದಿಯನ್ನು ಸ್ಮರಿಸಿದರು.



**ವೀರಪ್ಪ ಮೊಯ್ಲಿ**

### ಶಿಕ್ಷಣಕ್ಕೆ ಯಾವುದೇ ಮಿತಿ ಇಲ್ಲ

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಮಾತನಾಡಿ, "ಎಲ್ಲಾ ಇಲಾಖೆಗಳಿಗೆ ಒಂದು ವ್ಯಾಪ್ತಿ ಇರುತ್ತದೆ, ಆದರೆ ಶಿಕ್ಷಣ ಇಲಾಖೆಗೆ ಯಾವುದೇ ಮಿತಿಯಿಲ್ಲ. ಕಟ್ಟಕಡೆಯ ಮಗುವಿಗೂ ಸರ್ಕಾರದ ಸೌಲಭ್ಯಗಳನ್ನು ತಲುಪಿಸಲು ನಾವು ಪ್ರಾಮಾಣಿಕವಾಗಿ ಶ್ರಮಿಸುತ್ತೇವೆ," ಎಂದು ಭರವಸೆ ನೀಡಿದರು.



**ಮಧು ಬಂಗಾರಪ್ಪ**

### ಅಭಿವೃದ್ಧಿ ಎಂದರೆ ಕೇವಲ ರಸ್ತೆಯಲ್ಲ

ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಮಾತನಾಡಿ, "ವೀರಪ್ಪ ಮೊಯ್ಲಿ ಅವರ ಜೀವನದ ಯಶೋಗಾಥೆ ನಮಗೆಲ್ಲರಿಗೂ ಸ್ಫೂರ್ತಿ. ಕೇವಲ ರಸ್ತೆ, ಮೂಲಭೂತ ಸೌಕರ್ಯ ಅಭಿವೃದ್ಧಿಯಲ್ಲ; ಶಿಕ್ಷಣ, ಆರೋಗ್ಯ ಮತ್ತು ಮಹಿಳಾ ಸಬಲೀಕರಣವೇ ನಿಜವಾದ ಅಭಿವೃದ್ಧಿ," ಎಂದರು. ಅಲ್ಲದೆ ಉಡುಪಿ ಜಿಲ್ಲೆಯಲ್ಲಿ ಗೃಹಲಕ್ಷ್ಮಿ ಯೋಜನೆಯ ಯಶಸ್ಸಿನ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.



**ಲಕ್ಷ್ಮೀ ಹೆಬ್ಬಾಳ್ಕರ್**

### ಕ್ಷೇತ್ರದ ಅಭಿವೃದ್ಧಿಗೆ ಸುನಿಲ್ ಕುಮಾರ್ ಮನವಿ

ಶಾಸಕ ವಿ. ಸುನಿಲ್ ಕುಮಾರ್ ಅವರು ವೀರಪ್ಪ ಮೊಯ್ಲಿ ಅವರ 50 ವರ್ಷಗಳ ಸಾರ್ವಜನಿಕ ಸೇವೆಯನ್ನು ಶ್ಲಾಘಿಸಿದರು. ಇದೇ ವೇಳೆ 2027ರ ಫೆಬ್ರವರಿಯಲ್ಲಿ ನಡೆಯಲಿರುವ ಕಾರ್ಕಳದ ಮಹಾ ಮಸ್ತಕಾಭಿಷೇಕಕ್ಕೆ ವಿಶೇಷ ಪ್ಯಾಕೇಜ್ ಘೋಷಿಸಬೇಕು, ಹೆಬ್ರಿ ಆಸ್ಪತ್ರೆಯನ್ನು ತಾಲೂಕು ಆಸ್ಪತ್ರೆಯಾಗಿ ಮೇಲ್ದರ್ಜೆಗೇರಿಸಬೇಕು ಮತ್ತು ಜಿಲ್ಲೆಯ 9/11 ಹಾಗೂ ಕೆಂಪು ಕಲ್ಲು ಹೊಯಿಗೆ ಕೆಲಸದ ಸಮಸ್ಯೆಗಳನ್ನು ಸಡಿಲಗೊಳಿಸಬೇಕೆಂದು ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿದರು.

### ಹಂತ ಹಂತವಾಗಿ ಬೇಡಿಕೆ ಈಡೇರಿಕೆ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಾತನಾಡಿ, "ನಮ್ಮದು ನುಡಿದಂತೆ ನಡೆದ ಸರ್ಕಾರ. ಉದಯ ಕುಮಾರ್ ಶೆಟ್ಟಿ ಹಾಗೂ ಸುನಿಲ್ ಕುಮಾರ್ ಅವರು ನೀಡಿದ ಮನವಿಗಳನ್ನು ಒಮ್ಮೆಗೆ ಈಡೇರಿಸಲು ಸಾಧ್ಯವಾಗದಿದ್ದರೂ, ಹಂತ ಹಂತವಾಗಿ ಖಂಡಿತವಾಗಿ ಪೂರೈಸಲಾಗುವುದು. ಮಸ್ತಕಾಭಿಷೇಕಕ್ಕೆ ಸರ್ಕಾರದ ಸಂಪೂರ್ಣ ಸಹಕಾರವಿರುತ್ತದೆ," ಎಂದರು. ಮೊಯ್ಲಿ ಅವರ ಕಷ್ಟದ ಜೀವನ ಮತ್ತು ಅವರು ಶಿಕ್ಷಣ ಕ್ಷೇತ್ರಕ್ಕೆ ನೀಡುತ್ತಿರುವ ಕೊಡುಗೆ ಇತರರಿಗೆ ಮಾದರಿ ಎಂದು ಪ್ರಶಂಸಿಸಿದರು.

**– ಸಿಎಂ ಸಿದ್ದರಾಮಯ್ಯ**

ಬಡ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಯೇ ಸಂಸ್ಥೆಯ ಗುರಿ ಎಂಬ ವೀರಪ್ಪ ಮೊಯ್ಲಿ ಅವರ ಆಶಯಕ್ಕೆ ಪೂರಕವಾಗಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕ್ಷೇತ್ರದ ಅಭಿವೃದ್ಧಿ ಹಾಗೂ ಮುಂಬರುವ ಮಸ್ತಕಾಭಿಷೇಕಕ್ಕೆ ಸರ್ಕಾರದ ಸಂಪೂರ್ಣ ಸಹಕಾರ ನೀಡುವ ಭರವಸೆ ನೀಡಿದರು. ಶೈಕ್ಷಣಿಕ ಸೌಲಭ್ಯಗಳ ಉದ್ಘಾಟನೆಯೊಂದಿಗೆ ಸ್ಥಳೀಯ ಬೇಡಿಕೆಗಳಿಗೂ ಈ ಕಾರ್ಯಕ್ರಮ ಧ್ವನಿಯಾಯಿತು.ಕಾರ್ಯಕ್ರಮದಲ್ಲಿ ಮುನಿಯಾಲು ಉದಯ ಕೃಷ್ಣಯ್ಯ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಮುನಿಯಾಲು ಉದಯ ಕುಮಾರ್ ಶೆಟ್ಟಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು





## ಕೇರಳ ಇನ್ನು ಅಧಿಕೃತವಾಗಿ 'ಕೇರಳಂ'



**ತಿರುವನಂತಪುರಂ:** ಕೇರಳ ರಾಜ್ಯದ ಅಧಿಕೃತ ಹೆಸರನ್ನು ಆ ರಾಜ್ಯದ ಸಾಂಸ್ಕೃತಿಕ ಬೇರು ಹಾಗೂ ಮಲಯಾಳಂ ಭಾಷೆಯ ಉಚ್ಚಾರಣೆಗೆ ಅನುಗುಣವಾಗಿ 'ಕೇರಳಂ' ಎಂದು ಬದಲಾಯಿಸುವ ಮಹತ್ವದ ಪ್ರಸ್ತಾವನೆಗೆ ಕೇಂದ್ರ ಸಚಿವ ಸಂಪುಟ ಅಂಕಿತ ಹಾಕಲು ಸಜ್ಜಾಗಿದೆ.

ದಕ್ಷಿಣ ಭಾರತದ ರಾಜ್ಯವಾದ ಕೇರಳವನ್ನು ಇನ್ನು ಮುಂದೆ ಅಧಿಕೃತವಾಗಿ 'ಕೇರಳಂ' ಎಂದು ಕರೆಯುವ ಕಾಲ ಹತ್ತಿರ ಬಂದಿದೆ. ರಾಜ್ಯದ ಸಾಂಪ್ರದಾಯಿಕ ಅಸ್ಮಿತೆಯನ್ನು ಎತ್ತಿಹಿಡಿಯುವ ನಿಟ್ಟಿನಲ್ಲಿ ಕೇರಳ ವಿಧಾನಸಭೆಯು ಈಗಾಗಲೇ ಸರ್ವಾನುಮತದ ನಿರ್ಣಯವನ್ನು ಅಂಗೀಕರಿಸಿದ್ದು, ಸಂವಿಧಾನದ 8ನೇ ಪರಿಚ್ಛೇದದಲ್ಲಿರುವ ಎಲ್ಲಾ ಭಾಷೆಗಳಲ್ಲೂ ಹೆಸರನ್ನು ಬದಲಿಸುವಂತೆ ಕೇಂದ್ರಕ್ಕೆ ಶಿಫಾರಸು ಮಾಡಿದೆ. ಈ ಮೊದಲು ಸಲ್ಲಿಸಲಾಗಿದ್ದ ಪ್ರಸ್ತಾವನೆಗೆ ಕೇಂದ್ರ ಗೃಹ ಸಚಿವಾಲಯವು ಕೆಲವು ತಾಂತ್ರಿಕ ಬದಲಾವಣೆಗಳನ್ನು ಸೂಚಿಸಿತ್ತು. ಅದರಂತೆ 25 ಜೂನ್ 2024 ರಂದು ಪರಿಷ್ಕೃತ ನಿರ್ಣಯವನ್ನು ಅಂಗೀಕರಿಸಿ ಕೇಂದ್ರಕ್ಕೆ ಕಳುಹಿಸಿಕೊಡಲಾಗಿತ್ತು.

ಈಗಾಗಲೇ ರಾಜ್ಯದಲ್ಲಿ 140 ವಿಧಾನಸಭಾ ಕ್ಷೇತ್ರಗಳಿಗೆ ಚುನಾವಣೆ ಸನ್ನಿಹಿತವಾಗಿದ್ದು, ಏಪ್ರಿಲ್ ಅಥವಾ ಮೇ ತಿಂಗಳಲ್ಲಿ ಮತದಾನ ನಡೆಯುವ ಸಾಧ್ಯತೆಯಿದೆ. ಈ ಮಹತ್ವದ ಚುನಾವಣಾ ಘಟ್ಟಕ್ಕೆ ಮುನ್ನವೇ ಕೇಂದ್ರ ಸರ್ಕಾರವು ಈ ಹೆಸರಿನ ಬದಲಾವಣೆಗೆ ಮುದ್ರೆ ಒತ್ತಲು ನಿರ್ಧರಿಸಿದೆ. ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರ ನೇತೃತ್ವದ ಸರ್ಕಾರವು ಮಂಡಿಸಿದ ಈ ಪ್ರಸ್ತಾವನೆಯು ಸಾಕಾರಗೊಂಡರೆ, ಮಲಯಾಳಂ ಭಾಷಿಕರ ದಶಕಗಳ ಬೇಡಿಕೆ ಈಡೇರಿದಂತಾಗುತ್ತದೆ. ಈ ಸಾಂವಿಧಾನಿಕ ಬದಲಾವಣೆಯು ಕೇವಲ ಹೆಸರಿಗಷ್ಟೇ ಸೀಮಿತವಾಗದೆ, ರಾಜ್ಯದ ಭಾಷಾ ಮತ್ತು ಸಾಂಸ್ಕೃತಿಕ ಗರಿಮೆಯನ್ನು ರಾಷ್ಟ್ರಮಟ್ಟದಲ್ಲಿ ಅಧಿಕೃತವಾಗಿ ಸ್ಥಾಪಿಸಲಿದೆ.

## ವಿಧಾನ ಸೌಧದ ಅಂಗಳದಲ್ಲಿ ಮೊಳಗಲಿದೆ ಯಕ್ಷಗಾನದ ಗೆಜ್ಜೆ ನಾದ



ಬೆಂಗಳೂರು: ಶಾಸಕಾಂಗದ ಶಕ್ತಿ ಕೇಂದ್ರವಾಗಿರುವ ವಿಧಾನ ಸೌಧದ ಮುಂಭಾಗದ ಭವ್ಯ ಮೆಟ್ಟಿಲುಗಳು ಇದೇ ಮೊದಲ ಬಾರಿಗೆ ಸಾಂಸ್ಕೃತಿಕ ವೈಭವಕ್ಕೆ ಸಾಕ್ಷಿಯಾಗಲಿವೆ. ಕರಾವಳಿ ಮತ್ತು ಮಲೆನಾಡಿನ ಗಂಡುಕಲೆ ಎಂದೇ ಖ್ಯಾತಿಯಾಗಿರುವ 'ಯಕ್ಷಗಾನ' ಪ್ರದರ್ಶನವನ್ನು ಮುಂಬರುವ ಮೇ ತಿಂಗಳಲ್ಲಿ ಇಲ್ಲಿ ಆಯೋಜಿಸಲು ಸ್ಪೀಕರ್ ಯು.ಟಿ. ಖಾದರ್ ಅವರು ಗ್ರೀನ್ ಸಿಗ್ನಲ್ ನೀಡಿದ್ದಾರೆ.

ಮಂಗಳವಾರದಂದು ಕರ್ನಾಟಕ ಯಕ್ಷಗಾನ ಅಕಾಡೆಮಿಯ ಅಧ್ಯಕ್ಷರಾದ ಡಾ. ತಲ್ಲೂರು ಶಿವರಾಮ ಶೆಟ್ಟಿ ಅವರ ನೇತೃತ್ವದ ನಿಯೋಗವು ಸ್ಪೀಕರ್ ಅವರನ್ನು ಭೇಟಿ ಮಾಡಿ ಚರ್ಚಿಸಿದ ಸಂದರ್ಭದಲ್ಲಿ ಈ ಮಹತ್ವದ ತೀರ್ಮಾನ ಕೈಗೊಳ್ಳಲಾಗಿದೆ. ಈ ವಿಶೇಷ ಸಾಂಸ್ಕೃತಿಕ ಸಂಜೆಯು ಈ ಕೆಳಗಿನ ಪ್ರಮುಖ ಅಂಶಗಳನ್ನು ಒಳಗೊಂಡಿರಲಿದೆ:

**ಉಭಯತಿಟ್ಟುಗಳ ಸಮಾಗಮ:** ಯಕ್ಷಗಾನದ ಪ್ರಮುಖ ಶೈಲಿಗಳಾದ ತೆಂಕುತಿಟ್ಟು ಮತ್ತು ಬಡಗುತಿಟ್ಟು ಎರಡನ್ನೂ ಒಳಗೊಂಡಂತೆ ಸುಪ್ರಸಿದ್ಧ ಕಲಾವಿದರಿಂದ ಪ್ರದರ್ಶನ ಏರ್ಪಡಲಿದೆ.

**ಗಣ್ಯರಿಗಾಗಿ ವಿಶೇಷ ಪ್ರದರ್ಶನ:** ವಿಧಾನಸಭೆ ಮತ್ತು ವಿಧಾನಪರಿಷತ್ತಿನ ಸದಸ್ಯರಿಗಾಗಿ ಈ ಪ್ರದರ್ಶನವನ್ನು ಮೀಸಲಿರಿಸಲಾಗಿದ್ದು, ಹಿರಿಯ ವಿದ್ವಾಂಸರು ಈ ಕಲಾ ಪ್ರಕಾರದ ಬಗ್ಗೆ ಬೆಳಕು ಚೆಲ್ಲಲಿದ್ದಾರೆ.

**ಜಂಟಿ ಆಯೋಜನೆ:** ವಿಧಾನಸಭಾ ಸಚಿವಾಲಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಈ ಬೃಹತ್ ಕಾರ್ಯಕ್ರಮ ರೂಪಿತವಾಗಲಿದೆ.

ಸ್ಪೀಕರ್ ಅವರ ಆಸೆಯಂತೆ, ವಿಧಾನಸೌಧದ ಅಂಗಳದಲ್ಲಿ ಕಲೆಯ ಕಂಪನ್ನು ಪಸರಿಸಲು ಅಕಾಡೆಮಿಯು ಸರ್ವ ಸನ್ನದ್ಧವಾಗಿದೆ ಎಂದು ಡಾ. ತಲ್ಲೂರು ಶಿವರಾಮ ಶೆಟ್ಟಿ ತಿಳಿಸಿದ್ದಾರೆ. ಈ ಭೇಟಿಯ ಸಂದರ್ಭದಲ್ಲಿ ಅಕಾಡೆಮಿ ರಿಜಿಸ್ಟ್ರಾರ್ ಎನ್. ನಮ್ರತ ಹಾಗೂ ಸದಸ್ಯರಾದ ಮೋಹನ ಕದ್ರಿ, ಸುಧಾಕರ ಶೆಟ್ಟಿ ಉಪಸ್ಥಿತರಿದ್ದರು.

## ತಿರುಮಲ ಲಡ್ಡು ಪವಿತ್ರತೆಗೆ ಧಕ್ಕೆ



**ಅಮರಾವತಿ:** ವಿಶ್ವಪ್ರಸಿದ್ಧ ತಿರುಮಲ ತಿರುಪತಿ ದೇವಸ್ಥಾನದ ಪವಿತ್ರ 'ಲಡ್ಡು ಪ್ರಸಾದ'ದ ತಯಾರಿಕೆಯಲ್ಲಿ ನಡೆದಿರುವ ಮಹಾ ಮೋಸದ ಕುರಿತು ಆಚಿಧ್ರಪ್ರದೇಶದ ವಿಧಾನಸಭೆಯಲ್ಲಿ ಮಂಗಳವಾರ ಆಘಾತಕಾರಿ ಸತ್ಯಗಳು ಬಿಚ್ಚಿಕೊಂಡಿವೆ. ಹಿಂದಿನ ವೈಎಸ್ಆರ್‌ಸಿಪಿ ಸರ್ಕಾರದ ಅವಧಿಯಲ್ಲಿ ನಡೆದಿದೆ ಎನ್ನಲಾದ ಈ ಅವ್ಯವಹಾರವನ್ನು ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರು ಅಂಕಿ-ಅಂಶಗಳ ಸಹಿತ ಸದನದ ಮುಂದೆ ಇರಿಸಿದ್ದಾರೆ.ಸಂಘಟಿತ ಅಪರಾಧದನಗ್ನ ಸತ್ಯ ವಿಧಾನಸಭೆಯಲ್ಲಿ ನಡೆದ ಸುದೀರ್ಘ ಚರ್ಚೆಯಲ್ಲಿ ಮಾತನಾಡಿದ ಮುಖ್ಯಮಂತ್ರಿಗಳು, "ಇದು ಕೇವಲ ಆಕಸ್ಮಿಕವಾಗಿ ನಡೆದ ತಪ್ಪಲ್ಲ, ಬದಲಾಗಿ ವ್ಯವಸ್ಥಿತವಾಗಿ ರೂಪಿಸಿದ ಒಂದು ದೊಡ್ಡ ಹಗರಣ" ಎಂದು ಗುಡುಗಿದ್ದಾರೆ. ಮಾಜಿ ಸಿಎಂ ಜಗನ್ ಮೋಹನ್ ರೆಡ್ಡಿ ಅವರ ಆಡಳಿತಾವಧಿಯಲ್ಲಿ ತಿರುಮಲದ ಪಾವಿತ್ರ್ಯತೆಯನ್ನು ಗಾಳಿಗೆ ತೂರಿ, ಭಕ್ತರ ನಂಬಿಕೆಯೊಂದಿಗೆ ಚೆಲ್ಲಾಟವಾಡಲಾಗಿದೆ ಎಂದು ಅವರು ಗಂಭೀರ ಆರೋಪ ಮಾಡಿದ್ದಾರೆ."ಲಡ್ಡು ಪ್ರಸಾದವನ್ನು ತಯಾರಿಸುವಲ್ಲಿ ಒಂದು ಕ್ರಿಮಿನಲ್ ಸಿಂಡಿಕೇಟ್ ಕೆಲಸ ಮಾಡಿದೆ. ಲಾಭಕೋರತನಕ್ಕಾಗಿ ದೇವಾಲಯದ ಆಚರಣೆಗಳನ್ನು ಬಲಿಕೊಡಲಾಗಿದೆ," ಎಂದು ನಾಯ್ಡು ವಿಷಾದ ವ್ಯಕ್ತಪಡಿಸಿದ್ದಾರೆ. 2019 ರಿಂದ 2024ರ ಅವಧಿಯಲ್ಲಿ ನಡೆದ ಈ ಘಟನೆಗಳು ಹಿಂದೂ ಧರ್ಮದ ಮೇಲಿನ ದಾಳಿಯಂತೆ ಭಾಸವಾಗುತ್ತಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದ್ದಾರೆ.

### ಹಿರಿಯಡಕ ಶಂಕರನಾರಾಯಣ ಭಟ್ ಪುರಿಯಲ್ಲಿ ನಿಧನ



**ಹಿರಿಯಡಕ:** ಇಲ್ಲಿನ ಬ್ರಾಹ್ಮಣ ಮಹಾಸಭಾದ ಸಕ್ರಿಯ ಸದಸ್ಯರಾದ ಹಿರಿಯಡಕ ಶಂಕರನಾರಾಯಣ ಭಟ್ (60 ವರ್ಷ) ಅವರು ಒಡಿಶಾದ ಪುರಿ ಜಗನ್ನಾಥ ಕ್ಷೇತ್ರಕ್ಕೆ ಪ್ರವಾಸ ಕೈಗೊಂಡಿದ್ದ ಸಂದರ್ಭದಲ್ಲಿ ನಿನ್ನೆ ರಾತ್ರಿ (ಫೆಬ್ರುವರಿ 24) ಹೃದಯಾಘಾತದಿಂದ ನಿಧನರಾಗಿದ್ದಾರೆ. ಧಾರ್ಮಿಕ ಕಾರ್ಯಗಳಲ್ಲಿ ಮತ್ತು ಸಾಮಾಜಿಕ ಚಟುವಟಿಕೆಗಳಲ್ಲಿ ಸದಾ ಮುಂಚೂಣಿಯಲ್ಲಿದ್ದ ಭಟ್ ಅವರು, ಪುರಿ ಜಗನ್ನಾಥನ ದರ್ಶನಕ್ಕಾಗಿ ಯಾತ್ರೆಗೆ ತೆರಳಿದ್ದರು. ಮಂಗಳವಾರ ರಾತ್ರಿ ಅವರಿಗೆ ತೀವ್ರ ಹೃದಯಾಘಾತ ಸಂಭವಿಸಿದ್ದು, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ. ಇವರ ಅಗಲಿಕೆಗೆ ಬ್ರಾಹ್ಮಣ ಮಹಾಸಭಾ ಹಿರಿಯಡಕ ತೀವ್ರ ಸಂತಾಪ ವ್ಯಕ್ತಪಡಿಸಿದೆ. "ಅವರ ಆತ್ಮಕ್ಕೆ ಚಿರಶಾಂತಿ ಸಿಗಲಿ ಹಾಗೂ ಅವರ ಕುಟುಂಬದವರಿಗೆ ಈ ಅಪಾರ ದುಃಖವನ್ನು ಭರಿಸುವ ಶಕ್ತಿಯನ್ನು ಭಗವಂತ ನೀಡಲಿ" ಎಂದು ಮಹಾಸಭಾದ ಅಧ್ಯಕ್ಷರು ಹಾಗೂ ಸರ್ವ ಸದಸ್ಯರು ತಮ್ಮ ಶೋಕ ಸಂದೇಶದಲ್ಲಿ ಪ್ರಾರ್ಥಿಸಿದ್ದಾರೆ.